ಪ್ರ.72 - (11)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

**ವಿಷಯ:** "ರಾಜ್ಯದಲ್ಲಿ ಅಂಗನವಾಡಿ ಕೇಂದ್ರ ಮತ್ತು ಮಿನಿ ಅಂಗನವಾಡಿ ಕೇಂದ್ರಗಳ ಸಂಖ್ಯೆ 65 ಸಾವಿರ, ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತೆ ಹಾಗೂ ಸಹಾಯಕಿಯರ ಸಂಖ್ಯೆ (1.30) ಒಂದು ಲಕ್ಷದ ಮೂವತ್ತು ಸಾವಿರ ಸಿಬ್ಬಂದಿಗಳು. ಇವರ ಸೇವೆಯನ್ನು ಸರ್ಕಾರದ ವಿವಿಧ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲಾಗುತ್ತಿದ್ದು, ಆದರೆ ಸರ್ಕಾರದಿಂದ ಬರಬೇಕಾಗಿರುವ ಸೌಲಭ್ಯಗಳಿಂದ ಇವರು ವಂಚಿತರಾಗಿರುತ್ತಾರೆ.

ನಿವೃತ್ತಿ ಹೊಂದುವ ಸಿಬ್ಬಂದಿಗಳಿಗೆ ಸರ್ಕಾರದಿಂದ "ಇಡಿಗಂಟು" ನೀಡುವ ವ್ಯವಸ್ಥೆ ಇದೆ. ಆದರೆ ಇದುವರೆಗೂ ಕೆಲವೇ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಕ್ರಮವಾಗಿ ರೂ.50,000/- ಹಾಗೂ ರೂ.30,000/- ಗಳನ್ನು ಪಾವತಿ ಮಾಡಲಾಗಿದೆ. ಆದರೆ ಬಾಕಿ ಇರುವ 432 ಕಾರ್ಯಕರ್ತೆಯರು ಹಾಗೂ 1036 ಸಹಾಯಕಿಯರು, ಒಟ್ಟು 1468 ಸಿಬ್ಬಂದಿ ನಿವೃತ್ತಿ ಹೊಂದಿರುತ್ತಾರೆ. ಆದರೆ ಇದುವರೆಗೂ ಹಣ ಬಿಡುಗಡೆಗೊಂಡಿಲ್ಲ. ಸರ್ಕಾರದ ಆದೇಶದಂತೆ ವೈದ್ಯಕೀಯ ಸೌಲಭ್ಯ ಹಾಗೂ ಮರಣ ಪರಿಹಾರಕ್ಕಾಗಿ ತಲಾ ರೂ.50,000/- ನೀಡಬೇಕಾಗಿರುತ್ತದೆ. ಆದರೆ ಶಸ್ತ್ರಚಿಕಿತ್ಸೆ ಮತ್ತು ಮರಣ ಹೊಂದಿರುವ ಸಿಬ್ಬಂದಿಗೆ ಸರ್ಕಾರದಿಂದ ರೂ.75 ಲಕ್ಷ ಹಣ ಬಿಡುಗಡೆ ಮಾಡಬೇಕಾಗಿರುತ್ತದೆ. ಕಾರ್ಯಕರ್ತೆಯಾಗಿ ಹಾಗೂ ಸಹಾಯಕಿಯಾಗಿ ದೀರ್ಘಾವಧಿ ಸೇವೆ ಸಲ್ಲಿಸುತ್ತಿರುವವರಿಗೆ ಹಾಗೂ ಹೊಸದಾಗಿ ನೇಮಕಗೊಂಡವರಿಗೂ ವೇತನದಲ್ಲಿ ಯಾವುದೇ ವ್ಯತ್ಯಾಸವಿಲ್ಲ. ಇದರಿಂದ ದೀರ್ಘಕಾಲ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ಅನ್ಯಾಯವಾಗುತ್ತದೆ. ಈ ತಾರತಮ್ಯವನ್ನು ಸರಿಪಡಿಸಿ, ಸೇವಾ ಹಿರಿತನದ ಮೇಲೆ ವೇತನ ನೀಡಬೇಕಾಗಿದ್ದು, ಇದಲ್ಲದೇ ಇನ್ನು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ಇವರುಗಳ ಸಮಸ್ಯೆಯ ಬಗ್ಗೆ.

** ** **

## <u>ಉತ್ತರ:</u>

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ, ಮತ್ತು ಕಿಶೋರಿಯರ ಸರ್ವೋತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ರಾಜ್ಯದಲ್ಲಿ 204 ಯೋಜನೆಗಳಡಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. 66361 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 66361 ಅಂಗನವಾಡಿ ಕಾರ್ಯಕರ್ತೆ ಮತ್ತು 63030 ಅಂಗನವಾಡಿ ಸಹಾಯಕಿಯರ ಹುದ್ದೆಗಳು ಮಂಜೂರಾಗಿರುತ್ತದೆ.

**<u>ನಿವೃತ್ತಿ ಹೊಂದುವ ಸಿಬ್ಬಂದಿಗಳಿಗೆ ಸರ್ಕಾರದಿಂದ ಇಡಿಗಂಟು ನೀಡುವ ಬಗ್ಗೆ:</u>**

ಸರ್ಕಾರದ ಆದೇಶದ ದಿನಾಂಕ: 18.03.2011 ರಲ್ಲಿ ಇಡಿಗಂಟು ಯೋಜನೆಯನ್ನು ಜಾರಿಗೆ ತರಲಾಗಿತ್ತು. ಆದೇಶ ಹೊರಡಿಸಿದ ದಿನಾಂಕದಿಂದ 55 ವರ್ಷ ಮೇಲ್ಪಟ್ಟು ಮತ್ತು 60 ವರ್ಷದೊಳಗಿನ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಈ ಯೋಜನೆಗೆ ಒಳಪಟ್ಟಿರುತ್ತಾರೆ. ಪಿಂಚಣಿ ಯೋಜನೆಯಲ್ಲಿ ನೊಂದಾಯಿಸದ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ 60 ವರ್ಷ ತುಂಬಿದ ನಂತರ ಅನುಕ್ರಮವಾಗಿ ರೂ.50,000/- ಮತ್ತು ರೂ.30,000/ ಇಡಿಗಂಟನ್ನು ನೀಡಲಾಗುತ್ತಿತ್ತು. ಈ ಯೋಜನೆಯನ್ನು ಪಿಂಚಣಿ ಯೋಜನೆ ಜಾರಿ ಬಂದ ಹಿನ್ನಲೆಯಲ್ಲಿ 31.03.2015 ರಿಂದ ಸ್ಥಗಿತಗೊಳಿಸಲಾಗಿರುತ್ತದೆ.

ಪಿಂಚಣಿ ಯೋಜನೆಯಡಿ ನೊಂದಣಿಯಾಗದ ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ಇಡಿಗಂಟನ್ನು ಪಾವತಿಸಬೇಕಾಗಿರುವುದರಿಂದ 2011-12 ರಿಂದ 2020-21 ರವರೆಗೆ ನಿವೃತ್ತಿ ಹೊಂದಿದ 432 ಅಂಗನವಾಡಿ ಕಾರ್ಯಕರ್ತೆಯರು ಮತ್ತು 1036 ಅಂಗನವಾಡಿ ಸಹಾಯಕಿಯರಿಗೆ ಇಡಿಗಂಟು ನೀಡಲು ಒಟ್ಟು ಅನುದಾನ ರೂ.526.80 ಲಕ್ಷಗಳ ಅನುದಾನ ಅವಶ್ಯಕತೆಯಿದ್ದು, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ನಿರ್ದೇಶನದಂತೆ ಕೈಬಿಡಲಾಗಿದೆ.

**ವೈದ್ಯಕೀಯ ಮತ್ತು ಮರಣ ಪರಿಹಾರ ಸೌಲಭ್ಯ ಪಾವತಿಸುವ ಕುರಿತು :**

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಸೇವೆಯಲ್ಲಿರುವಾಗ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಅನುಕ್ರಮವಾಗಿ ರೂ.20,000/- ಮತ್ತು ರೂ.10,000/- ಗಳನ್ನು ಪಾವತಿಸಲು ಸರ್ಕಾರದ ಆದೇಶ ದಿನಾಂಕ: 10.09.2001 ರಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ಸರ್ಕಾರದ ಆದೇಶದ ದಿನಾಂಕ: 14.03.2017 ರಲ್ಲಿ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಸೇವಾ ಅವಧಿಯಲ್ಲಿ ನೀಡುತ್ತಿರುವ ವೈದ್ಯಕೀಯ ವೆಚ್ಚವನ್ನು ರೂ.50,000/- ಹೆಚ್ಚಿಸಿ ಆದೇಶಿಸಲಾಗಿದೆ.

ಗಂಭೀರ ಸ್ವರೂಪದ ಖಾಯಿಲೆಗಳಾದ ಹೃದ್ರೋಗ ಶಸ್ತ್ರಚಿಕಿತ್ಸೆ, ಕ್ಯಾನ್ಸರ್ ಖಾಯಿಲೆ, ಡಯಾಲಿಸಿಸ್, ಮೂತ್ರಪಿಂಡ ಜೋಡಣೆ ಖಾಯಿಲೆ ಮತ್ತು ಗರ್ಭಕೋಶ ಶಸ್ತ್ರಚಿಕಿತ್ಸೆಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರು ಸೇವೆಯಲ್ಲಿದ್ದಾಗ ಮರಣ ಹೊಂದಿದ್ದಲ್ಲಿ ಮರಣ ಪರಿಹಾರ ಮೊತ್ತವಾಗಿ ಸರ್ಕಾರದ ಆದೇಶ ದಿನಾಂಕ: 10/09/2001 ರಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.20,000/- ಮತ್ತು ಸಹಾಯಕಿಯರಿಗೆ ರೂ.10,000/- ಗಳನ್ನು ಪಾವತಿಸಲು ಅವಕಾಶವಿತ್ತು. ಸರ್ಕಾರದ ಆದೇಶ ದಿನಾಂಕ: 01/09/2014 ರಿಂದ ಮರಣ ಪರಿಹಾರ ಮೊತ್ತವನ್ನು ರೂ.50,000/- ಕ್ಕೆ ಹೆಚ್ಚಿಸಲಾಗಿದೆ.

2021-22ನೇ ಸಾಲಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಮರಣ ಪರಿಹಾರ ಹಾಗೂ ವೈದ್ಯಕೀಯ ಚಿಕಿತ್ಸೆಗೆ ರೂ.75.00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಮರಣ ಪರಿಹಾರಕ್ಕೆ 232 ಹಾಗೂ ವೈದ್ಯಕೀಯ ಚಿಕಿತ್ಸೆ ಮರುಪಾವತಿಗೆ 15 ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದ್ದು, ಸದರಿ ಅನುದಾನದಿಂದ ಪರಿಹಾರ ಪಾವತಿಸಲು ಕ್ರಮ ವಹಿಸಲಾಗುತ್ತಿದೆ.

**ಸೇವಾ ಹಿರಿತನದ ಮೇಲೆ ವೇತನ ನಿಗದಿಪಡಿಸುವ ಬಗ್ಗೆ :**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಸರ್ಕಾರವು ನಿಗದಿಪಡಿಸಿದ ಗೌರವಧನವನ್ನು ಪಾವತಿಸಲಾಗುತ್ತಿದೆ. ಇದಲ್ಲದೇ ರಾಜ್ಯ ಸರ್ಕಾರವೂ ಸಹ ಹೆಚ್ಚುವರಿಯಾಗಿ ಗೌರವಧನವನ್ನು ಪಾವತಿಸುತ್ತಿದೆ. ಪ್ರಸ್ತುತ ಪಾವತಿಸುತ್ತಿರುವ ಗೌರವಧನದ ವಿವರ ಈ ಕೆಳಕಂಡಂತಿದೆ.

(ರೂ.ಗಳಲ್ಲಿ)

| ಕ್ರ. ಸಂ. | ವಿವರ | ಕೇಂದ್ರ ಸರ್ಕಾರದಿಂದ ನಿಗದಿಪಡಿಸಿರುವ ಗೌರವಧನ | ಕೇಂದ್ರ ಸರ್ಕಾರದ ಪಾಲು | ರಾಜ್ಯ ಸರ್ಕಾರದ ಪಾಲು | ರಾಜ್ಯ ಸರ್ಕಾರದಿಂದ ನೀಡುತ್ತಿರುವ ಹೆಚ್ಚುವರಿ ಗೌರವಧನ | ಒಟ್ಟು | ರಾಜ್ಯ ಸರ್ಕಾರದಿಂದ ನೀಡುತ್ತಿರುವ ಒಟ್ಟು ಗೌರವಧನ |
|---|---|---|---|---|---|---|---|
| 1 | **ಅಂಗನವಾಡಿ ಕಾರ್ಯಕರ್ತೆ** | **4500** | **2700** | **1800** | **5500** | **10000** | **7300** |
| 2 | **ಅಂಗನವಾಡಿ ಸಹಾಯಕಿ** | **2500** | **1500** | **1000** | **2750** | **5250** | **3750** |
| 3 | **ಮಿನಿ ಅಂಗನವಾಡಿ ಕಾರ್ಯಕರ್ತೆ** | **3500** | **2100** | **1400** | **2750** | **6250** | **4150** |

ಕೇಂದ್ರ ಸರ್ಕಾರದ ಯೋಜನೆಯಾಗಿರುವುದರಿಂದ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಗೌರವಧನವನ್ನು ಪಾವತಿಸಲಾಗುತ್ತಿದೆ. ಗೌರವಧನವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಪಾತ 60:40 ರಂತೆ ಭರಿಸುತ್ತಿದೆ. ಇದಲ್ಲದೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ಗೌರವಧನವನ್ನು ಪಾವತಿಸಲಾಗುತ್ತಿದೆ.

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಸೇವಾವಧಿಯ ಆಧಾರದ ಮೇಲೆ ಗೌರವಧನವನ್ನು ನಿಗಧಿಪಡಿಸುವ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಸಂಘಗಳ ಬೇಡಿಕೆ ಇದ್ದು, ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ. ಇತರೆ ಬೇಡಿಕೆಗಳ ಬಗ್ಗೆ ಸಹ ಆಗಿಂದಾಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.

ಮಮಇ 311 ಐಸಿಡಿ 2021

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.